# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 34, ಗಂಗೇನಹಳ್ಳಿ

ಸಂಖ್ಯೆ: ಸ.ಅ/ವಾ-34/ಪಿ.ಆರ್/ /2022-23 ದಿನಾಂಕ:-02-07-2022

### ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ:-02-07-2022 ರಂದು ವಾರ್ಡ್ ನಂ:34, ಗಂಗೇನಹಳ್ಳಿ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

### :: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ತಿಮ್ಮರಸ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಸೋಮಶೇಖರ್ ನಿಟ್ಟೂರೆ | ಸಹಾಯಕ ಅಭಿಯಂತರರು ವಾಡ್ ನಂ: 34 |
| 3. | ಶ್ರೀಮತಿ ಸುವರ್ಣದೇವಿ.ವೈ.ಬಿ | ವರ್ಕ್ ಇನ್ಸ್‌ಪೆಕ್ಟರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 4. | ಶ್ರೀ. ಅಖೀಬ್ ಸಲ್ಮಾ | ಹಿರಿಯ ಆರೋಗ್ಯ ಪರಿವೀಕ್ಷಕರು |
| 5. | ಶ್ರೀ. ಶ್ರೀನಿವಾಸ್ | ಸಾರ್ವಜನಿಕರು |
| 6. | ಶ್ರೀ. ಚರಣ್ | ಸಾರ್ವಜನಿಕರು |
| 7. | ಶ್ರೀ. ನರಸಿಂಹ | ಸಾರ್ವಜನಿಕರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯಾದ ಶ್ರೀ. ತಿಮ್ಮರಸ ಮತ್ತು ಕಾರ್ಯದರ್ಶಿ, ಸಹಾಯಕ ಅಭಿಯಂತರರಾದ ಶ್ರೀ.ಸೋಮಶೇಖರ್ ನಿಟ್ಟೂರೆ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

1. ಘನತ್ಯಾಜ್ಯ:- ವಾರ್ಡ್‌ನ ರುದ್ರಭೂಮಿಯ ಹತ್ತಿರ ಕಸವನ್ನು ಕ್ರಮಬದ್ಧವಾಗಿ ವಿಲೇವಾರಿ ಮಾಡುವಂತೆ ವಾರ್ಡ್‌ನ ಸಾರ್ವಜನಿಕರಾದ ಶ್ರೀ. ಶ್ರೀನಿವಾಸ್ ರವರಿಂದ ದೂರು ಬಂದಿದ್ದು, ಅದರ ಬಗ್ಗೆ ಚರ್ಚಿಸಲಾಯಿತು.
2. 2ನೇ ಅಡ್ಡರಸ್ತೆ, ಮುತ್ತಪ್ಪ ಬ್ಲಾಕ್‌ನಲ್ಲಿ ಓ.ಎಫ್.ಸಿ ಕೇಬಲ್ ನವರು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರ ಒಳಚರಂಡಿ ಸಂಪರ್ಕದ ಲೈನ್ ಅನ್ನು ಅಗೆದಿದ್ದು, ಇದರ ಬಗ್ಗೆ ವಾರ್ಡ್‌ನ ಸಾರ್ವಜನಿಕರಾದ ಶ್ರೀ. ಶ್ರೀನಿವಾಸ್ ರವರಿಂದ ದೂರು ಬಂದಿದ್ದು, ಅದರ ಬಗ್ಗೆ ಚರ್ಚಿಸಲಾಯಿತು.
3. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗಳ ಗುಂಡಿಗಳನ್ನು ಮುಚ್ಚುವ ಬಗ್ಗೆ ವಾರ್ಡ್‌ನ ಸಾರ್ವಜನಿಕರಾದ ಶ್ರೀ. ಶ್ರೀನಿವಾಸ್ ರವರಿಂದ ದೂರು ಬಂದಿದ್ದು, ಅದರ ಬಗ್ಗೆ ಚರ್ಚಿಸಲಾಯಿತು.
4. ನೃಪತುಂಗ ಬಡಾವಣೆಯ ಇಂದಿರ ಕ್ಯಾಂಟೀನ್ ಪಕ್ಕದಲ್ಲಿರುವ ಉದ್ಯಾನವನ ಜಾಗದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ವಾರ್ಡ್ ಕಛೇರಿ ಹೊಸದಾಗಿ ಕಟ್ಟಡವನ್ನು ನಿರ್ಮಿಸಲು 40 * 40 ಅಡಿ ಜಾಗವನ್ನು ಕಾಯ್ದಿರಿಸುವ ಬಗ್ಗೆ ಚರ್ಚಿಸಲಾಯಿತು.

5. ವಾರ್ಡ್ ಸಮಿತಿ ಸಭೆಗೆ ಗೈರು ಹಾಜರಾಗಿರುವ ಅಧಿಕಾರಿಗಳಿಗೆ ಮುಂದಿನ ಸಭೆಗೆ ಹಾಜರಾಗಲು ಸೂಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿ ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 34 ಗಂಗೇನಹಳ್ಳಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 34 ಗಂಗೇನಹಳ್ಳಿ

**ಪ್ರತಿಯನ್ನು:**

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
5. ಕಛೇರಿ ಕಡತಕ್ಕೆ.